**Akashvani : Bangalore**
**Regional Bulletin In Kannada**
**21.02.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

**೧. ಅಬಕಾರಿ ಮಾರಾಟ ಸಂಘ-ಸಂಸ್ಥೆಗಳ ಜೊತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಯವ್ಯಯ ಕುರಿತ ಪೂರ್ವಭಾವಿ ಸಭೆ**

**೨. ಕಲ್ಯಾಣ ಕರ್ನಾಟಕ ಭಾಗದ ಮಹಿಳೆಯರ ಆರ್ಥಿಕ ಸಬಲತೆಗಾಗಿ ಇದೇ ೨೪ ರಿಂದ ’ರಾಷ್ಟ್ರೀಯ ಸರಸ್ ಮೇಳ’**

**೩. ಬೆಂಗಳೂರು ಅಭಿವೃದ್ಧಿಗಾಗಿ ಬಿಬಿಎಂಪಿ ಚುನಾವಣೆ ನಡೆಸುವಂತೆ ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹ**

**೪. ಮೈಸೂರಿನ ಚಾಮುಂಡಿಬೆಟ್ಟದಲ್ಲಿ ಬೆಂಕಿ ಅವಘಡ; ಅಗ್ನಿ ಶಾಮಕ ಸಿಬ್ಬಂದಿಯಿಂದ ಕಾರ್ಯಾಚರಣೆ**

**೫. ಬೆಂಗಳೂರಿನ ವಸತಿ ಸಮುಚ್ಚಯಗಳಲ್ಲಿ ಕಾವೇರಿ ನೀರಿನ ಸಂಪರ್ಕ ಪ್ರಕ್ರಿಯೆ ಸರಳೀಕರಿಸಲಿರುವ ಜಲಮಂಡಳಿ**

**<><*<><>*><>**

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಅಬಕಾರಿ ಮಾರಾಟ ಸಂಘ ಸಂಸ್ಥೆಗಳ ಪ್ರತಿನಿಧಿಗಳ ಜೊತೆಗೆ ಬಜೆಟ್ ಪೂರ್ವ ಸಭೆ ನಡೆಸಿದರು. ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್.ಪಾಟೀಲ್, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ್ ರಾಯರೆಡ್ಡಿ, ಸರ್ಕಾರದ ಉನ್ನತ ಮಟ್ಟದ ಅಧಿಕಾರಿಗಳು ಮತ್ತು ಅಬಕಾರಿ ಮಾರಾಟ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಇದಕ್ಕೂ ಮೊದಲು ಅವರು, ಸಾರಿಗೆ ಸಂಘ-ಸಂಸ್ಥೆಗಳ ಜೊತೆ ಬಜೆಟ್ ಪೂರ್ವ ಸಭೆ ನಡೆಸಿ, ಅವರ ಬೇಡಿಕೆ ಮತ್ತು ಅಹವಾಲುಗಳನ್ನು ಆಲಿಸಿದರು.

**<><*<><>*><>**

ಕಲ್ಯಾಣ ಕರ್ನಾಟಕ ಭಾಗದ ಮಹಿಳೆಯರ ಆರ್ಥಿಕ ಸಬಲತೆಗಾಗಿ ಇದೇ ೨೪ ರಿಂದ ೧೦ ದಿನಗಳ ಕಾಲ ರಾಷ್ಟ್ರೀಯ ಸರಸ್ ಮೇಳವನ್ನು ಕಲಬುರಗಿಯಲ್ಲಿ ಆಯೋಜನೆ ಮಾಡಲಾಗಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣ್ ಪ್ರಕಾಶ್ ಆರ್. ಪಾಟೀಲ್ ತಿಳಿಸಿದ್ದಾರೆ. ಕಲಬುರಗಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಮೇಳದಲ್ಲಿ ಕರ್ನಾಟಕ ಸೇರಿದಂತೆ ೧೮ ರಾಜ್ಯಗಳಿಂದ ಮಹಿಳಾ ಸ್ವಸಹಾಯ ಸಂಘಗಳ ೨ ಸಾವಿರ ಮಹಿಳೆಯರು ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದ್ದಾರೆ. ಹತ್ತು ದಿನಗಳ ಕಾಲ ರಾಜ್ಯದ ೨೩೦ ಕ್ಕೂ ಹೆಚ್ಚು ಮಹಿಳಾ ಸ್ವಸಹಾಯ ಗುಂಪುಗಳು ಉತ್ಪಾದನೆ ಮಾಡಿರುವ ವಸ್ತುಗಳನ್ನು ಮಾರಾಟ ಮಾಡಲಿದ್ದಾರೆ. ರಾಷ್ಟ್ರ ಮಟ್ಟದ ಸರಸ್ ಮೇಳಕ್ಕೆ ಜಿಲ್ಲಾ ಉಸ್ತುವಾರಿ ಹಾಗೂ ರಾಜ್ಯ ಪಂಚಾಯತ್ ಮತ್ತು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಚಾಲನೆ ನೀಡಲಿದ್ದಾರೆ.

**<><*<><>*><>**

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ಸಾಮಾಜಿಕ ಹೊಣೆಗಾರಿಕೆ ನಿಧಿಯಲ್ಲಿ ಬೆಂಗಳೂರಿನಲ್ಲಿ ಥೀಮ್ ಪಾರ್ಕ್ ನಿರ್ಮಾಣ ಮಾಡಲಿದೆ. ಎಚ್.ಬಿ.ಆರ್. ಲೇಔಟ್‌ನಲ್ಲಿಂದು ಇಂಧನ ಸಚಿವ ಕೆ.ಜೆ.ಜಾರ್ಜ್, ಅರಣ್ಯ ಇಲಾಖೆ ಸಚಿವ ಈಶ್ವರ್ ಖಂಡ್ರೆ ಶಂಕುಸ್ಥಾಪನೆ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಕೆ.ಜೆ.ಜಾರ್ಜ್, ಅಂದಾಜು ೪ ಕೋಟಿ ೬೫ ಲಕ್ಷ ರೂಪಾಯಿ ವೆಚ್ಚದಲ್ಲಿ ಥೀಮ್ ಪಾರ್ಕ್ ಅಭಿವೃದ್ಧಿ ಮಾಡಲಾಗುತ್ತಿದೆ ಎಂದು ತಿಳಿಸಿದರು. ಇದಕ್ಕೂ ಮೊದಲು ಸರ್ವಜ್ಞನಗರ, ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹೆಣ್ಣೂರು ಜೀವ ವೈವಿಧ್ಯ ಉದ್ಯಾನವನದಲ್ಲಿ ಉಭಯ ಸಚಿವರು ಪರಿಶೀಲನೆ ನಡೆಸಿದರು. ಇಲ್ಲಿ ವಿಶೇಷ ಪ್ರಭೇದದ ಸಸ್ಯಗಳನ್ನು ಬೆಳೆಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

**<><*<><>*><>**

ಬೆಂಗಳೂರಿನ ಅಭಿವೃದ್ಧಿಗಾಗಿ ಆದಷ್ಟುಬೇಗ ಬಿಬಿಎಂಪಿ ಚುನಾವಣೆ ನಡೆಸಬೇಕು ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಒತ್ತಾಯಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾvನಾಡಿದ ಅವರು, ಬಿಬಿಎಂಪಿ ಚುನಾವಣೆ ಸಂಬಂಧ ನ್ಯಾಯಾಲಯದಲ್ಲಿ ವಾದ ಮಾಡಲು ೧೫ ತಜ್ಞರ ತಂಡವನ್ನು ರಚಿಸಲಾಗಿದೆ ಎಂದು ಹೇಳಿದ್ದಾರೆ. ಕಾಂಗ್ರೆಸ್ ಸರ್ಕಾರದಿಂದ ಬೆಂಗಳೂರಿನ ಅಭಿವೃದ್ಧಿ ಶೂನ್ಯವಾಗಿದ್ದು, ರಸ್ತೆ, ಗುಂಡಿಗಳಿಂದ ಜನರು ಆಸ್ಪತ್ರೆ ಸೇರುತ್ತಿದ್ದಾರೆ. ಇದರ ವಿರುದ್ಧ ಮುಂದಿನ ದಿನಗಳಲ್ಲಿ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

**<><*<><>*><>**

ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ಇಂದು ಬೆಂಕಿ ಕಾಣಿಸಿಕೊಂಡಿದೆ. ಈ ಹಿನ್ನೆಲೆಯಲ್ಲಿ ಅಗ್ನಿ ಶಾಮಕದಳದ ಸಿಬ್ಬಂದಿ ಆಗಮಿಸಿ ಬೆಂಕಿ ನಂದಿಸುವ ಕಾರ್ಯದಲ್ಲಿ ನಿರತರಾಗಿದ್ದಾರೆ. ಮದ್ಯಾಹ್ನ ೧:೩೦ರ ವೇಳೆಗೆ ಬೆಟ್ಟದ ಕೆಳ ಭಾಗದಿಂದ ಬೆಂಕಿ ಕಾಣಿಸಿಕೊಂಡಿದೆ. ಆಕಾಶವಾಣಿಯೊಂದಿಗೆ ಮಾತನಾಡಿದ ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಗುರುರಾಜ್, ಬೆಂಕಿ ನಂದಿಸಲು ಪ್ರಯತ್ನಿಸಲಾಗುತ್ತಿದ್ದು, ಬೆಂಕಿ ಹತೋಟಿಗೆ ಸಿಗುತ್ತಿಲ್ಲ ಎಂದು ತಿಳಿಸಿದ್ದಾರೆ.

**ಧ್ವನಿ: ಗುರುರಾಜ್, ಅಗ್ನಿಶಾಮಕ ಅಧಿಕಾರಿ**

೬ ಅಗ್ನಿ ಶಾಮಕ ವಾಹನಗಳು, ನಗರದ ೪ ವಾಹನ ಹಾಗೂ ಇತರೆಡೆ ಇರುವ ವಾಹನಗಳನ್ನು ಬೆಂಕಿ ನಂದಿಸಲು ಬಳಸಿಕೊಳ್ಳಲಾಗಿದೆ.

**<><*<><>*><>**

ಬೆಂಗಳೂರಿನ ವಸತಿ ಸಮುಚ್ಛಯಗಳಲ್ಲಿ ಕಾವೇರಿ ನೀರಿನ ಸಂಪರ್ಕ ಪಡೆಯುವ ಪ್ರಕ್ರಿಯೆಯನ್ನು ಸರಳೀಕರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಬಿಡಬ್ಲೂಎಸ್ಎಸ್‌ಬಿ ಅಧ್ಯಕ್ಷ ಡಾ.ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ. ಬೆಂಗಳೂರು ಅಪಾರ್ಟ್‌ಮೆಂಟ್ ಫೆಡರೇಷನ್ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಸರಣಿ ಸಭೆಯಲ್ಲಿ ಭಾಗವಹಿಸಿದ ಅವರು, ಹಲವಾರು ಗೊಂದಲಗಳಿಗೆ ಸ್ಥಳದಲ್ಲೇ ಪರಿಹಾರ ಒದಗಿಸಿದರು.  ಶುಲ್ಕ ಸಂಬಂಧಿಸಿದಂತಹ ಯಾವುದೇ ಸಮಸ್ಯೆಗಳು ಹಾಗೂ ಗೊಂದಲಗಳು ಉಂಟಾದಲ್ಲಿ ಗ್ರಾಹಕರು ದೂರು ನೀಡಲು ಹಾಗೂ ಅದಕ್ಕೆ ಪರಿಹಾರ ಪಡೆದುಕೊಳ್ಳಲು ಅನುವು ಮಾಡಿಕೊಡುವ ನಿಟ್ಟಿನಲ್ಲಿ ಮುಖ್ಯ ಅಭಿಯಂತರರ ನೇತೃತ್ವದಲ್ಲಿ ಸಮಿತಿಯನ್ನು ರಚಿಸಲಾಗುವುದು ಎಂದು ಹೇಳಿದ್ದಾರೆ. ಕಾವೇರಿ ನೀರಿನ ಸಂಪರ್ಕ ಪಡೆದುಕೊಳ್ಳುವ ವಸತಿ ಸಮುಚ್ಛಯಗಳಿಗೆ ಪ್ರತಿನಿತ್ಯ ಪ್ರತಿಮನೆಗೂ ೨೦೦ ಲೀಟರ್ ನೀರು ಸರಬರಾಜು ಮಾಡಲಾಗುವುದು. ಹಂತ ಹಂತವಾಗಿ ಅಗತ್ಯವಿರುವ ಪ್ರಮಾಣದ ನೀರನ್ನು ನೀಡುವುದು ತಮ್ಮ ಗುರಿಯಾಗಿದೆ ಎಂದು ಡಾ.ರಾಮ್ ಪ್ರಸಾತ್ ಭರವಸೆ ನೀಡಿದ್ದಾರೆ.

**<><*<><>*><>**

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳು ರಾಜಕೀಯ ಲಾಭಕ್ಕಾಗಿ, ಮಾಡಿದ ಯೋಜನೆಗಳಾಗಿವೆ ಎಂದು ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ಗದಗ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರದ ಗೃಹ ಲಕ್ಷ್ಮೀ

ಹಣ ಯಾವ ತಿಂಗಳೂ ಮಹಿಳೆಯರ ಬ್ಯಾಂಕ ಖಾತೆಗೆ ಬಂದಿಲ್ಲ ಎಂದು ದೂರಿದ್ದಾರೆ. ರಾಜ್ಯದಲ್ಲಿ ಹಣಕಾಸಿನ ಪರಿಸ್ಥಿತಿ ಸಂಪೂರ್ಣ ನೆಲಕಚ್ಚಿದೆ ಎಂದು ಆರೋಪಿಸಿದ್ದಾರೆ.

**ಧ್ವನಿ: ಬಸವರಾಜ ಬೊಮ್ಮಾಯಿ, ಸಂಸದ**

**<><*<><>*><>**

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಇದೇ ೨೩ರ ಭಾನುವಾರ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೧೯ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಬಿತ್ತರಗೊಳ್ಳಲಿದೆ. ಅಲ್ಲದೇ, ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಯಲ್ಲಿ ಕಾರ್ಯಕ್ರಮ ಪ್ರಸಾರವಾಗಲಿದೆ. ಕಾರ್ಯಕ್ರಮಕ್ಕೆ ಸಾರ್ವಜನಿಕರು ಸಲಹೆ ಹಾಗೂ ಅಭಿಪ್ರಾಯಗಳನ್ನು ಕಳುಹಿಸಲು ಇಂದು ಕೊನೆಯ ದಿನವಾಗಿದೆ. ಆಸಕ್ತರು ಒಥಿ ಉov.iಟ ವೇದಿಕೆ ಮೂಲಕ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಬಹುದಾಗಿದೆ.

**<><*<><>*><>**

ಕಂದಾಯ ಇಲಾಖೆಯ ಆಪ್, ಎನ್ ೫ ಸಾಫ್ಟ್ವೇರ್ ಬಂದ ನಂತರ ಅರ್ಜಿಗಳ ವಿಲೇವಾರಿ ತ್ವರಿತ ಗತಿಯಲ್ಲಿ ಸಾಗುತ್ತಿದೆ. ಜಿಲ್ಲೆಯ ನಾಡಕಚೇರಿಯಲ್ಲಿ ಸಲ್ಲಿಕೆಯಾಗುವ ಜಾತಿ ಆದಾಯ ಪ್ರಮಾಣ ಪತ್ರ ಸೇರಿದಂತೆ ವಿವಿಧ ಅರ್ಜಿಗಳ ವಿಲೇವಾರಿಯಲ್ಲಿ ಜಿಲ್ಲಾಮಟ್ಟದ ರಾಂಕಿಂಗ್ ನಲ್ಲಿ ಕಮಲಾಪುರ ಮೊದಲ ಸ್ಥಾನದಲ್ಲಿದ್ದು, ಕೂಡ್ಲಿಗಿ ತಾಲೂಕಿನ ಕಾನಹೊಸಳ್ಳಿ ನಾಲ್ಕು ಮತ್ತು ಗುಡಿ ಕೋಟೆ ೫ನೇ ಸ್ಥಾನದಲ್ಲಿವೆ. ಈ ಕುರಿತು ಆಕಾಶವಾಣಿಗೆ ವಿಶೇಷ ಮಾಹಿತಿ ನೀಡಿದ ಜಿಲ್ಲಾಧಿಕಾರಿ ಎಂ ಎಸ್ ದಿವಾಕರ್ ರಾಜ್ಯಮಟ್ಟದ ಶ್ರೇಣಿಯಲ್ಲಿ ೧೦ನೇ ಸ್ಥಾನದೊಳಗೆ ಬರುವಂತೆ ಕಾರ್ಯನಿರ್ವಹಿಸಲು ಎಲ್ಲಾ ನಾಡಕಚೇರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

**<><*<><>*><>**

ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಡಿ ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಡಿಸೆಂಬರ್ ೦೭ ರಿಂದ ೧೦೦ ದಿನಗಳ ಕಾಲ ನಡೆದ ಕ್ಷಯರೋಗ ಪತ್ತೆ ಅಭಿಯಾನದಲ್ಲಿ ೨೬ ಕ್ಷಯರೋಗ ಪ್ರಕರಣಗಳು ದೃಢಪಟ್ಟಿವೆ. ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳು, ಮದ್ಯಪಾನಿಗಳು, ಧೂಮಪಾನಿಗಳು, ಕ್ಷಯರೋಗಿಗಳ ನಿಕಟವರ್ತಿಗಳು, ೬೦ ವರ್ಷ ಮೇಲ್ಪಟ್ಟವರು ಹಾಗೂ ಮಧುಮೇಹಿಗಳನ್ನು ತಪಾಸಣೆಗೆ ಒಳಪಡಿಸಲಾಗಿತ್ತು ಎಂದು ಜಿಲ್ಲಾ ಆರೋಗ್ಯಾಧಿಕಾರಿ ಕಚೇರಿ ಪ್ರಕಟಣೆ ತಿಳಿಸಿದೆ.

**<><*<><>*><>**

ಕೇಂದ್ರ ಸರ್ಕಾರದ 'ಮಹತ್ವಾಕಾಂಕ್ಷೆ ಜಿಲ್ಲೆ ಯೋಜನೆಯಡಿ' ರೂಪಿಸಲಾದ ಕಾರ್ಯಕ್ರಮಗಳನ್ನು ರಾಯಚೂರು ಜಿಲ್ಲೆಯಲ್ಲಿ ಉತ್ತಮ ರೀತಿಯಲ್ಲಿ ಅನುಷ್ಠಾನಗೊಳ್ಳಿಸಬೇಕೆಂದು ಕೇಂದ್ರ ಸರ್ಕಾರದ ಹಣಕಾಸು ಸಚಿವಾಲಯದ ಜಂಟಿ ಕಾರ್ಯದರ್ಶಿ ಸಮೀರ್ ಶುಕ್ಲಾ ತಿಳಿಸಿದ್ದಾರೆ. ಮಹತ್ವಾಕಾಂಕ್ಷೆ ಜಿಲ್ಲೆ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಹತ್ವಾಕಾಂಕ್ಷೆ ಜಿಲ್ಲೆ ಯೋಜನೆ ೨೦೧೮ರಲ್ಲಿ ಜಾರಿಗೊಂಡಿದ್ದು, ದೇಶದೆಲ್ಲೆಡೆ ಹಿಂದುಳಿದ ೧೧೨ ಜಿಲ್ಲೆಗಳನ್ನು ಅಭಿವೃದ್ಧಿ ಪಥದಲ್ಲಿ ಸಾಗಿಸುವ ಗುರಿ ಹೊಂದಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**